# ಕರ್ನಾಟಕ ವಿಧಾನ ಪರಿಷತ್ತು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 313

ಸದಸ್ಯರ ಹೆಸರು : ಶ್ರೀ ರಮೇಶ್ ಬಾಬು

(ನಾಮನಿರ್ದೇಶನ ಹೊಂದಿದವರು)

ಉತ್ತರಿಸುವ ಸಚಿವರು : ಮಾನ್ಯ ಕಂದಾಯ ಸಚಿವರು

ಉತ್ತರಿಸುವ ದಿನಾಂಕ : 10.12.20205

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ತುಮಕೂರು ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ ಭೂ ಕಂದಾಯ ಕಾಯಿದೆ ಅಡಿಯಲ್ಲಿ ಭೂ ವಿವಾದಗಳಿಗೆ ಸಂಬಂಧಿಸಿದ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು; ಕಳೆದ 3 ವರ್ಷಗಳಲ್ಲಿ ಎಷ್ಟು ಪ್ರಕರಣಗಳನ್ನು ಇತ್ಯರ್ಥ ಪಡಿಸಲಾಗಿದೆ ಮತ್ತು ಎಷ್ಟು ಪ್ರಕರಣಗಳನ್ನು ಉಪವಿಭಾಗಾಧಿಕಾರಿಗಳಿಗೆ ಮರು ವಿಚಾರಣೆಗೆ ವಾಪಸ್ಸು ಮಾಡಲಾಗಿದೆ: | ತುಮಕೂರು ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ ಭೂ ಕಂದಾಯ ಕಾಯಿದೆ ಅಡಿಯಲ್ಲಿ ಭೂ ವಿವಾದಗಳಿಗೆ ಸಂಬಂಧಿಸಿದಂತೆ ಒಟ್ಟು 213 ಪ್ರಕರಣಗಳು ಬಾಕಿ ಇರುತ್ತವೆ.<br><br>ಕಳೆದ ಮೂರು ವರ್ಷಗಳಲ್ಲಿ 1859 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದ್ದು, ಇವುಗಳಲ್ಲಿ 148 ಪ್ರಕರಣಗಳನ್ನು ಮರುವಿಚಾರಣೆಗಾಗಿ ಉಪ ವಿಭಾಗಾಧಿಕಾರಿಗಳಿಗೆ ಹಿಂದಿರುಗಿಸಲಾಗಿದೆ. |
| (ಆ) | ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ಮತ್ತು ಮಧುಗಿರಿ ಉಪ ವಿಭಾಗಾಧಿಕಾರಿಗಳ ಅರೆನ್ಯಾಯಿಕ ನ್ಯಾಯಲಯದಲ್ಲಿ ಬಾಕಿ ಇರುವ ಪ್ರಕರಣಗಳೆಷ್ಟು; ಕಳೆದ 3 ವರ್ಷಗಳಿಂದ ಈ ವಿಭಾಗಗಳಲ್ಲಿ ವಿಲೇವಾರಿ ಆಗಿರುವ ಪ್ರಕರಣಗಳೆಷ್ಟು; (ಪೂರ್ಣ ವಿವರಗಳನ್ನು ಒದಗಿಸುವುದು) | ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿಗೆ ಸಂಬಂಧಿಸಿದಂತೆ ಒಟ್ಟು 34 ಪ್ರಕರಣಗಳು ಬಾಕಿ ಇದ್ದು, ಕಳೆದ ಮೂರು ವರ್ಷಗಳಲ್ಲಿ 754 ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿರುತ್ತದೆ.<br><br>ಮಧುಗಿರಿ ಉಪ ವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ಒಟ್ಟು 600 ಪ್ರಕರಣಗಳು ಬಾಕಿ ಇದ್ದು, ಕಳೆದ ಮೂರು ವರ್ಷಗಳಲ್ಲಿ 5595 ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿರುತ್ತದೆ. |
| (ಇ) | ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕು ತಹಶಿಲ್ದಾರ್ ಅರೆನ್ಯಾಯಿಕ ನ್ಯಾಯಾಲಯದಲ್ಲಿ ಬಾಕಿ ಇರುವ ಭೂ ವಿವಾದ ಸಂಬಂಧದ ಪ್ರಕರಣಗಳೆಷ್ಟು; ಕಳೆದ 3 ವರ್ಷಗಳಿಂದ ಈ ನ್ಯಾಯಾಲಯದಲ್ಲಿ ವಿಲೇವಾರಿಯಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; (ವಿವರಗಳನ್ನು ಒದಗಿಸುವುದು) | ತುಮಕೂರು ಜಿಲ್ಲೆ, ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ತಹಶೀಲ್ದಾರ್ ನ್ಯಾಯಾಲಯದಲ್ಲಿ ಒಟ್ಟು 69 ಪ್ರಕರಣಗಳು ಬಾಕಿ ಇದ್ದು, ಕಳೆದ ಮೂರು ವರ್ಷಗಳಲ್ಲಿ 909 ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿರುತ್ತದೆ. |

| | | |
|---|---|---|
| (ಈ) | ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಸಾಗುವಳಿ ಚೀಟಿ ಕೋರಿ ಎಷ್ಟು ಅರ್ಜಿಗಳು ವಿಲೇವಾರಿಗೆ ಬಾಕಿ ಇವೆ; ಕಳೆದ 5 ವರ್ಷಗಳಲ್ಲಿ ಎಷ್ಟು ರೈತರಿಗೆ ಸಾಗುವಳಿ ಚೀಟಿ ವಿತರಿಸಲಾಗಿದೆ? (ವಿವರಗಳನ್ನು ಒದಗಿಸುವುದು) | ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಸಾಗುವಳಿ ಚೀಟಿ ಕೋರಿ ಒಟ್ಟು 25 ಪ್ರಕರಣಗಳು ಬಾಕಿ ಇರುತ್ತವೆ.<br><br>ಕಳೆದ ಐದು ವರ್ಷಗಳಲ್ಲಿ 624 ಪ್ರಕರಣಗಳಲ್ಲಿ ಸಾಗುವಳಿ ಚೀಟಿಗಳನ್ನು ವಿತರಿಸಲಾಗಿರುತ್ತದೆ. |

**ಸಂ: ಕಂಇ 184 ಟಿಆರ್‌ಎಂ 2025 (1984508)**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು